# ಎನ್‌ಐಟಿಕೆ ಹಳೇ ವಿದ್ಯಾರ್ಥಿ ನಂ.1 ಸಾಧನೆ

**ಮಂಗಳೂರು:** ಅರ್ಜುನ ಪ್ರಶಸ್ತಿ ಪುರಸ್ಕೃತ ಭಾರತೀಯ ವೃತ್ತಿಪರ ಪ್ಯಾರಾ ಬ್ಯಾಡ್ಮಿಂಟನ್ ಆಟಗಾರ, ಸುರತ್ಕಲ್ ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ(ಎನ್‌ಐಟಿಕೆ)ಹಳೇ ವಿದ್ಯಾರ್ಥಿ ಡಾ.ಸುಹಾಸ್ ಲಾಲಿನಕೆರೆ ಯತಿರಾಜ್ ಅವರು ಬ್ಯಾಡ್ಮಿಂಟನ್ ವರ್ಲ್ಡ್ ಫೆಡರೇಶನ್‌ನ ಪುರುಷರ ಸಿಂಗಲ್ಸ್ ಬ್ಯಾಡ್ಮಿಂಟನ್‌ನಲ್ಲಿ ನಂಬರ್ ವನ್ ಸ್ಥಾನ ಪಡೆದು ಅಮೋಘ ಸಾಧನೆ ಮಾಡಿದ್ದಾರೆ.



» ಪುರುಷರ ಸಿಂಗಲ್ಸ್ ಬ್ಯಾಡ್ಮಿಂಟನ್

ಹಾಸನ ಮೂಲದ ಸುಹಾಸ್ ಸುರತ್ಕಲ್ ಎನ್‌ಐಟಿಕೆಯಲ್ಲಿ 2004ರ ಬ್ಯಾಚ್‌ನಲ್ಲಿ ಬಿಟೆಕ್ ವಿದ್ಯಾರ್ಥಿಯಾಗಿದ್ದರು. ಬ್ಯಾಡ್ಮಿಂಟನ್ ವರ್ಲ್ಡ್ ಫೆಡರೇಶನ್ ರ್‍ಯಾಂಕಿಂಗ್‌ನಲ್ಲಿ ಮೊದಲ ಸ್ಥಾನಕ್ಕೇರಿದ್ದು, ಹತ್ತಿರದ ಪ್ರತಿಸ್ಪರ್ಧಿ ಫ್ರಾನ್ಸ್‌ನ ಲುಕಾಸ್ ಮಝೂರ್ ಅವರನ್ನು ಹಿಂದಿಕ್ಕಿದ್ದಾರೆ. ಡಾ.ಸುಹಾಸ್ ಎಲ್. ಯತಿರಾಜ್ ಅವರು ಪ್ರಸ್ತುತ ಉತ್ತರ ಪ್ರದೇಶದಲ್ಲಿ ಐಎಎಸ್ ಅಧಿಕಾರಿಯಾಗಿ ಸೇವೆ ಸಲ್ಲಿಸುತ್ತಿದ್ದಾರೆ. 2019ರಲ್ಲಿ ಎನ್‌ಐಟಿಕೆಯ ವಜ್ರ ಮಹೋತ್ಸವ ವರ್ಷದಲ್ಲಿ ಅವರನ್ನು ವಿಶೇಷ ಹಳೆಯ ವಿದ್ಯಾರ್ಥಿ ಎಂದು ಗೌರವಿಸಲಾಗಿತ್ತು.

Vijayavani, Date: 28/06/24, p, no-5